
"ವಾಯುವ್ಯ ಶಿಕ್ಷಕರ ಕ್ಷೇತ್ರದ ಮಾನ್ಯ ಜನಪ್ರಿಯ ಶಾಸಕರಾದ ಶ್ರೀಯುತ ಅರುಣ್ ಶಹಾಪುರ
ರವರು ಮಾನ್ಯ ಮುಖ್ಯಮಂತ್ರಿಗಳೊಂದಿಗೆ ಮಾತುಕತೆಯಲ್ಲಿ ನಿರತರಾಗಿರುವುದು..."
Sri Arun Shahapur, MLC, North West Teacher's Constituency with CM Sri Siddaramaiah....







ದಿನಾಂಕ 27-09-2017

ಮಾನ್ಯ ವಿಧಾನಪರಿಷತ್ ಸದಸ್ಯರುಗಳ ಬೇಡಿಕೆಗಳಿಗೆ ಸಂಬಂಧಿಸಿದಂತೆ ದಿನಾಂಕ 15-09-2017 ಹಾಗೂ 27-09-2017 ರಂದು ಸನ್ಮಾನ್ಯ ಮುಖ್ಯಮಂತ್ರಿಗಳ ಅಧ್ಯಕ್ಷತೆಯಲ್ಲಿ ನಡೆದ ಸಭೆಯಲ್ಲಿ ತೆಗೆದುಕೊಂಡ ತೀರ್ಮಾನಗಳ ವಿವರಗಳು:-

1) ವೇತನ ತಾರತಮ್ಯ :-

ಪ್ರಾಥಮಿಕ, ಪ್ರೌಢಶಾಲೆ, ಪದವಿಪೂರ್ವ ಕಾಲೇಜುಗಳ ಶಿಕ್ಷಕರು, ಮುಖ್ಯೋಪಾಧ್ಯಾಯರು, ಉಪನ್ಯಾಸಕರು ಹಾಗೂ ಪ್ರಾಂಶುಪಾಲರ ವೇತನ ತಾರತಮ್ಯ ನಿವಾರಿಸಲು 6ನೇ ವೇತನ ಆಯೋಗಕ್ಕೆ Terms of Reference ಪತ್ರ ಈಗಾಗಲೇ ಕಳುಹಿಸಿಕೊಡಲಾಗಿರುತ್ತದೆ. ವೇತನ ತಾರತಮ್ಯವನ್ನು ಸರಿಪಡಿಸಲು ಮತ್ತೊಮ್ಮೆ Specific Reference ಕಳುಹಿಸಲಾಗುವುದು.

2) ಕಾಲ್ಪನಿಕ ವೇತನ ಬಡ್ತಿ ಸಮಸ್ಯೆಗೆ ಪರಿಹಾರ:-

ಈ ಬಗ್ಗೆ ಸಂಪೂರ್ಣ ವರದಿಯನ್ನು ಶ್ರೀ ಬಸವರಾಜ ಹೊರಟ್ಟಿ ನೇತೃತ್ವದ ಸಮಿತಿಗೆ ಸಲ್ಲಿಸಲು ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ, ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ, ಇವರಿಗೆ ಸೂಚಿಸಲಾಗಿದೆ.

3) ವರ್ಗಾವಣೆ ಮಾನದಂಡ:-

ಈಗಾಗಲೇ ವರ್ಗಾವಣೆ ನೀತಿಯನ್ನು ಜಾರಿಗೆ ತರಲಾಗಿದೆ. ಇದಕ್ಕೆ ಪೂರಕವಾಗಿ ಪ್ರಪ್ರಥಮ ಬಾರಿಗೆ ಇಲಾಖೆಯಲ್ಲಿ ಕರಡು ನಿಯಮಾವಳಿಗಳನ್ನು ಸಿದ್ಧಪಡಿಸಿದ್ದು, ಸಂಬಂಧಿಸಿದ ಎಲ್ಲಾ ಶಿಕ್ಷಕರು/ಪ್ರತಿನಿಧಿಗಳು ಆಕ್ಷೇಪಣೆಗಳನ್ನು ಸಲ್ಲಿಸಿದಲ್ಲಿ ಸಲಹೆಗಳನ್ನು ಸ್ವೀಕರಿಸಿ, ಅಂತಿಮವಾಗಿ ನಿಯಮಾವಳಿಗಳಲ್ಲಿ ಅಳವಡಿಸಿಕೊಳ್ಳಲು ಕ್ರಮ ವಹಿಸಲಾಗುವುದು.

4) <u>ಜ್ಯೋತಿ ಸಂಜೀವಿನಿ:- ಸರ್ಕಾರಿ ಶಾಲಾ ಶಿಕ್ಷಕರಿಗೆ ನೀಡುತ್ತಿರುವ ಜ್ಯೋತಿ ಸಂಜೀವಿನಿ ಯೋಜನೆಯನ್ನು ವಿಸ್ತರಿಸಿ ಅನುದಾನಿತ ಮತ್ತು ಅನುದಾನರಹಿತ ಶಿಕ್ಷಕರಿಗೆ ವಿಸ್ತರಿಸುವುದು.</u>

ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ ವತಿಯಿಂದ "ಯೂನಿವರ್ಸಲ್ ಹೆಲ್ತ್ ಇನ್ಸುರೆನ್ಸ್" ಯೋಜನೆಯನ್ನು ಜಾರಿಗೆ ತರಲಾಗುತ್ತಿದ್ದು, ಸದರಿ ಯೋಜನೆಯಡಿಯಲ್ಲಿ ಖಾಸಗಿ ಅನುದಾನಿತ ಮತ್ತು ಸರ್ಕಾರಿ ಹಾಗೂ ಎಲ್ಲಾ ರೀತಿಯ ವರ್ಗದ ಜನರಿಗೂ ಸೌಲಭ್ಯ ದೊರೆಯಲಿದೆ. ಅಲ್ಲಿಯವರೆಗೆ ಜ್ಯೋತಿ ಸಂಜೀವಿನಿ ಕಾರ್ಯಕ್ರಮವನ್ನು ಅನುದಾನಿತ ಶಿಕ್ಷಣ ಸಂಸ್ಥೆಗಳಿಗೆ ವಿಸ್ತರಿಸುವ ಬಗ್ಗೆ ಹಣಕಾಸು ಇಲಾಖೆಯೊಂದಿಗೆ ಚರ್ಚಿಸಲಾಗುವುದು.

5) <u>ಪ್ರೌಢಶಾಲಾ ಶಿಕ್ಷಕರಿಗೆ ಪದವಿಪೂರ್ವ ಕಾಲೇಜಿಗೆ ಉಪನ್ಯಾಸಕರಾಗಿ ಬಡ್ತಿ ನೀಡುವುದು.</u>

ಮಾನ್ಯ ಸರ್ವೋಚ್ಛ ನ್ಯಾಯಾಲಯವು ನೀಡಿರುವ ತೀರ್ಪಿನ ಹಿನ್ನೆಲೆಯಲ್ಲಿ ತಾತ್ಕಾಲಿಕವಾಗಿ ಎಲ್ಲಾ ವೃಂದಗಳ ಮುಂಬಡ್ತಿಯನ್ನು ತಡೆಹಿಡಿಯಲಾಗಿರುತ್ತದೆ. ಆದಾಗ್ಯೂ ಕೆ.ಸಿ.ಎಸ್.ಆರ್. ನಿಯಮ 32 ರಡಿಯಲ್ಲಿ ಬಡ್ತಿ ನೀಡಲು ಅಗತ್ಯ ಕ್ರಮ ಜರುಗಿಸಲಾಗುವುದು.

6) <u>ಶಿಕ್ಷಕ/ಉಪನ್ಯಾಸಕರಿಗೆ ಕಾಲಕಾಲಕ್ಕೆ ಪದೋನ್ನತಿ ನೀಡುವುದು.</u>

ಕೆ.ಸಿ.ಎಸ್.ಆರ್. ನಿಯಮ 32 ರಡಿಯಲ್ಲಿ ಈಗಾಗಲೇ ಇಲಾಖೆಯಲ್ಲಿ ಮುಖ್ಯೋಪಾಧ್ಯಾಯರಿಂದ ಕ್ಷೇತ್ರ ಶಿಕ್ಷಣಾಧಿಕಾರಿ ಹುದ್ದೆಗೆ, ಕ್ಷೇತ್ರ ಶಿಕ್ಷಣಾಧಿಕಾರಿ ಹುದ್ದೆಯಿಂದ ಉಪನಿರ್ದೇಶಕರ ಹುದ್ದೆಗೆ, ಉಪನಿರ್ದೇಶಕರ ಹುದ್ದೆಯಿಂದ ಜಂಟಿ ನಿರ್ದೇಶಕರ ಹುದ್ದೆಗೆ, ಜಂಟಿ ನಿರ್ದೇಶಕರ ಹುದ್ದೆಯಿಂದ ನಿರ್ದೇಶಕ ಹುದ್ದೆಗೆ ಪದೋನ್ನತಿ ನೀಡಲಾಗುತ್ತಿದೆ.

7) <u>ಬಡ್ತಿ ನೀಡುವ ಸಂದರ್ಭದಲ್ಲಿ ಕೌನ್ಸಿಲಿಂಗ್ ಮೂಲಕ ಸ್ಥಳ ಆಯ್ಕೆ:-</u>

✓ ಈಗಾಗಲೇ ಬಡ್ತಿ ನೀಡಿ ಕೌನ್ಸಿಲಿಂಗ್ ಮೂಲಕ ಸ್ಥಳ ಆಯ್ಕೆಗೆ ಕ್ರಮ ವಹಿಸಲಾಗಿದೆ.

8) <u>ಟಿ.ಜಿ.ಟಿ. ಶಿಕ್ಷಕರ ಸಮಸ್ಯೆಗೆ ಪರಿಹಾರ:-</u>

✓ ದಿನಾಂಕ 20-09-2017 ರಂದು ಈ ಬಗ್ಗೆ ಆದೇಶ ಹೊರಡಿಸಲಾಗಿದೆ.

9) <u>ವಿಶೇಷ ವಾರ್ಷಿಕ ಬಡ್ತಿಯನ್ನು ತತ್ಸಮಾನ ಹುದ್ದೆಗಳಿಗೂ ವಿಸ್ತರಣೆ</u>

✓ ದಿನಾಂಕ 20-09-2017 ರಂದು ಈ ಬಗ್ಗೆ ಆದೇಶ ಹೊರಡಿಸಲಾಗಿದೆ.

10) <u>ದಿನಾಂಕ 1-8-2008ರ ನಂತರ ನೇಮಕಾತಿಗೊಂಡ ಪ್ರೌಢಶಾಲಾ ಸಹಶಿಕ್ಷಕರಿಗೆ ರೂ.400/-ಗಳನ್ನು ಪೂರ್ವಾನ್ವಯವಾಗಿ ವಿಶೇಷ ಭತ್ಯೆ ನೀಡುವುದು:-</u>

✓ ಈ ಬಗ್ಗೆ ಆರ್ಥಿಕ ಇಲಾಖೆಯೊಂದಿಗೆ ಸಮಾಲೋಚಿಸಲಾಗುವುದು.

**11) ಖಾಸಗಿ ಅನುದಾನಿತ ಪ್ರಾಥಮಿಕ/ಪ್ರೌಢ/ಪದವಿ ಪೂರ್ವ / ಪದವಿ ಶಾಲಾ ಕಾಲೇಜುಗಳಲ್ಲಿ ನಿಧನ, ನಿವೃತ್ತಿ, ರಾಜೀನಾಮೆಯಿಂದ ತೆರವಾದ ಹುದ್ದೆಗಳನ್ನು ಭರ್ತಿ ಮಾಡಲು ಅನುಮತಿ ನೀಡುವುದು:-**

ಪ್ರೌಢಶಾಲೆಗಳಲ್ಲಿ ಡಿಸೆಂಬರ್-2014ರವರೆಗೆ ಉಂಟಾಗಿರುವ ಖಾಲಿ ಹುದ್ದೆಗಳನ್ನು ಭರ್ತಿ ಮಾಡಲು ಅನುಮತಿ ನೀಡಿ ಆದೇಶ ಹೊರಡಿಸಲಾಗಿದೆ.

ಪದವಿಪೂರ್ವ ಕಾಲೇಜುಗಳಲ್ಲಿ ಡಿಸೆಂಬರ್-2015 ರವರೆಗೆ ಉಂಟಾಗಿರುವ ಖಾಲಿ ಹುದ್ದೆಗಳನ್ನು ತುಂಬಲು ಅನುಮತಿ ನೀಡಿ ಆದೇಶಿಸಲಾಗಿರುತ್ತದೆ. ನೇಮಕಾತಿ ಪ್ರಕ್ರಿಯೆಯನ್ನು ಸರಳೀಕೃತಗೊಳಿಸಲು ಎಲ್ಲಾ ಕ್ರಮಗಳನ್ನು ಕೈಗೊಳ್ಳಲಾಗುವುದು.

**12) ಖಾಸಗಿ ಅನುದಾನಿತ ಪದವಿ ಪೂರ್ವ ಕಾಲೇಜುಗಳಲ್ಲಿ 100 ವಿದ್ಯಾರ್ಥಿಗಳಿದ್ದ ಪ್ರತಿ ಕಾಲೇಜಿಗೆ ಒಬ್ಬ ದೈಹಿಕ ಉಪನ್ಯಾಸಕರ ಹುದ್ದೆಯನ್ನು ಅನುದಾನಕ್ಕೆ ಒಳಪಡಿಸುವುದು:-**

ಸಚಿವ ಸಂಪುಟ ಸಭೆಯಲ್ಲಿ ಕೈಗೊಂಡ ತೀರ್ಮಾನದಂತೆ, ಖಾಸಗಿ ಅನುದಾನಿತ ಶಾಲಾ ಮತ್ತು ಪದವಿ ಪೂರ್ವ ಕಾಲೇಜುಗಳಲ್ಲಿ ವಿದ್ಯಾರ್ಥಿಗಳು ಮತ್ತು ದೈಹಿಕ ಶಿಕ್ಷಕರ ಅನುಪಾತವನ್ನು ಮುಂದಿನ 3 ತಿಂಗಳಲ್ಲಿ ಸರಿಪಡಿಸಲು ಕ್ರಮ ವಹಿಸಲಾಗುವುದು.

13)<u>ಪದವಿ ಕಾಲೇಜುಗಳಿಂದ ವಿಭಜನೆಗೊಂಡ ಪದವಿ ಪೂರ್ವ ಕಾಲೇಜುಗಳಲ್ಲಿ ಖಾಲಿ ಇರುವ ಎಲ್ಲಾ ಹುದ್ದೆಗಳನ್ನು ತುಂಬಲು ಅನುಮತಿ ನೀಡುವುದು:-</u>

ಈ ವಿಷಯಕ್ಕೆ ಸಂಬಂಧಿಸಿದಂತೆ ಸಂಪೂರ್ಣ ಮಾಹಿತಿಯೊಂದಿಗೆ ಮುಂದಿನ ಸಚಿವ ಸಂಪುಟ ಸಭೆಗೆ ವಿಷಯ ಮಂಡಿಸಲಾಗುವುದು.

14)<u>ಪದವಿ ಪೂರ್ವ ಕಾಲೇಜುಗಳಲ್ಲಿ ಕಡ್ಡಾಯ ಮಾಡಿರುವ ಬಿ.ಎಡ್. ಪದವಿಯ ಕುರಿತು:-</u>

2013ನೇ ಸಾಲಿನಲ್ಲಿ ಸರ್ಕಾರಿ ಪದವಿ ಪೂರ್ವ ಕಾಲೇಜುಗಳಿಗೆ ನೇಮಕಗೊಂಡು ಬಿ.ಎಡ್. ಪದವಿ ಹೊಂದುವ ಷರತ್ತಿನೊಂದಿಗೆ ನೇಮಕಗೊಂಡಿರುವವರಿಗೆ ಡೈಸ್-ನಾನ್ ಮಾಡಿರುವುದನ್ನು ತೆಗೆಯುವ ಬಗ್ಗೆ ಸಿ.ಆ.ಸು. ಇಲಾಖೆಯೊಂದಿಗೆ ಸಮಾಲೋಚಿಸಿ ತೀರ್ಮಾನಿಸಲಾಗುವುದು.

15)<u>ವೃತ್ತಿ ತರಬೇತಿ (ಜೆ.ಓ.ಸಿ.) ಇಲಾಖೆಯಿಂದ ಪದವಿಪೂರ್ವ ಶಿಕ್ಷಣ ಇಲಾಖೆಗೆ ಸಕ್ರಮಗೊಂಡಿರುವ ಉಪನ್ಯಾಸಕರಿಗೆ ಬಿ.ಇಡಿ., ಪದವಿಯಿಂದ ವಿನಾಯಿತಿ ನೀಡುವುದು ಹಾಗೂ ಅವರಿಗೆ ಖಾಯಂ ಪೂರ್ವ ಅವಧಿ (ಪ್ರೊಬೆಷನರಿ ಪಿರಿಯಡ್) ಘೋಷಿಸುವುದು:-</u>

ನಿವೃತ್ತಿ ಹೊಂದಲು ಇನ್ನು ಕೇವಲ 2 ವರ್ಷ ಬಾಕಿ ಇರುವ ಹಾಗೂ ಶಿಕ್ಷಣ ಇಲಾಖೆಯಲ್ಲಿ ಉಪನ್ಯಾಸಕರಾಗಿ ವಿಲೀನಗೊಂಡಿರುವ ಎಲ್ಲರಿಗೂ ಬಿ.ಎಡ್. ಪದವಿ ಹೊಂದುವ ಷರತ್ತಿನಿಂದ ವಿನಾಯಿತಿ ನೀಡಲಾಗುವುದು.

16)ಶಿಕ್ಷಕ ಮತ್ತು ವಿದ್ಯಾರ್ಥಿಗಳ ಅನುಪಾತ ಕಡಿತಗೊಳಿಸುವ ಕುರಿತು:-

ಈ ಬಗ್ಗೆ ಎನ್.ಸಿ.ಟಿ.ಇ. ನಿಯಮಗಳಂತೆ ಶಿಕ್ಷಕ ವಿದ್ಯಾರ್ಥಿಗಳ ಅನುಪಾತ 1:70 ರಿಂದ 1:50 ಕ್ಕೆ ಇಳಿಸಲು ತೀರ್ಮಾನಿಸಲಾಗಿದೆ.

17) ಮಾನ್ಯತೆ ನವೀಕರಣ:-

ಮಾನ್ಯತೆ ನವೀಕರಣ ವಿಧಾನವನ್ನು ಸರಿಪಡಿಸಲು ಈಗಾಗಲೇ ಆನ್‌ಲೈನ್ ವ್ಯವಸ್ಥೆ ಅಳವಡಿಸಿಕೊಂಡಿದ್ದು, ಡಿಸೆಂಬರ್-2017ರೊಳಗೆ ಅನುಷ್ಠಾನಗೊಳಿಸಲಾಗುವುದು.

18) ಬೋಧಕೇತರ ಹುದ್ದೆಗಳನ್ನು ತುಂಬಲು ಅನುಮತಿ:-

ಸರ್ಕಾರದ ಸುತ್ತೋಲೆಯಂತೆ ಬೋಧಕೇತರ ಹುದ್ದೆಗಳನ್ನು ಸರ್ಕಾರದ ಅನುದಾನದೊಂದಿಗೆ ಬಾಹ್ಯ ಮೂಲಗಳಿಂದ ಪಡೆಯಲು ಅನುಮತಿ ನೀಡಲಾಗಿರುತ್ತದೆ.

19) ಬಡ್ತಿ ಹೊಂದಿದ ಸಹ ಶಿಕ್ಷಕರಿಗೆ ಕಾಲಮಿತಿ ಬಡ್ತಿ ನೀಡುವ ಬಗ್ಗೆ :-

ಈ ಬಗ್ಗೆ ಕಾಲಮಿತಿ ಮುಂಬಡ್ತಿ ಪಡೆದ ಶಿಕ್ಷಕರುಗಳಿಗಿಂತ ಕಡಿಮೆ ವೇತನ ಪಡೆಯುವ ಎಲ್ಲ ಶಿಕ್ಷಕರಿಗೂ ಆಗಿರುವ ವ್ಯತ್ಯಾಸವನ್ನು ಸರಿಪಡಿಸಲು ಕ್ರಮ ವಹಿಸಲಾಗುವುದು.

20) <u>ಪ್ರಾಥಮಿಕ ಮತ್ತು ಪ್ರೌಢಶಾಲೆಗಳಲ್ಲಿ ದೈಹಿಕ ಶಿಕ್ಷಕರ ನೇಮಕಾತಿ:-</u>

ಮುಂದಿನ ವರ್ಷದ ಆರಂಭದಲ್ಲಿಯೇ ಹೊರಡಿಸಲಾಗುವ 8000 ಶಿಕ್ಷಕರ ನೇಮಕಾತಿ ಅಧಿಸೂಚನೆಯಲ್ಲಿ ಕನಿಷ್ಠ 1,000 ದೈಹಿಕ ಶಿಕ್ಷಕರ ನೇಮಕಾತಿಗೂ ಅಧಿಸೂಚನೆ ಹೊರಡಿಸಲಾಗುವುದು.

21) <u>ಪ್ರೌಢ ಹಾಗೂ ಪದವಿ ಪೂರ್ವ ಪರೀಕ್ಷಾ ವ್ಯವಸ್ಥೆಯನ್ನು ದಿಢೀರನೆ ಬದಲಾವಣೆ ಮಾಡಿ ಗೊಂದಲ ಸೃಷ್ಟಿಸಿದ ಕುರಿತು:-</u>

ಈ ಬಗ್ಗೆ ಕ್ಷೇತ್ರ ಶಿಕ್ಷಣಾಧಿಕಾರಿ, ಉಪನಿರ್ದೇಶಕರು (ಆಡಳಿತ) ಸಾ.ಶಿ.ಇ., ಉಪನಿರ್ದೇಶಕರು (ಪದವಿಪೂರ್ವ ಶಿಕ್ಷಣ), ಇವರುಗಳ ಮುಖಾಂತರ ಹಾಗೂ ಇವರುಗಳ ಶಿಫಾರಸಿನಂತೆ ಪರೀಕ್ಷಾ ಕೇಂದ್ರಗಳನ್ನು ರಚಿಸಿ, ಗ್ರಾಮೀಣ ಪ್ರದೇಶ, ತಾಲ್ಲೂಕು ಹಾಗೂ ಜಿಲ್ಲಾ ಕೇಂದ್ರಗಳಲ್ಲಿ ಅತ್ಯಂತ ಯಶಸ್ವಿಯಾಗಿ ಯಾವುದೇ ರೀತಿಯ ಗೊಂದಲಗಳಿಗೆ ಅವಕಾಶವಿಲ್ಲದಂತೆ ಪರೀಕ್ಷೆಯನ್ನು ನಡೆಸಿದ್ದು, ಈ ಬಗ್ಗೆ ವಿದ್ಯಾರ್ಥಿಗಳು, ಪೋಷಕರು, ಶಿಕ್ಷಕರು ಮತ್ತು ಶಿಕ್ಷಕರ ಕ್ಷೇತ್ರ ಪ್ರತಿನಿಧಿಗಳು ಸರ್ಕಾರಕ್ಕೆ, ಇಲಾಖೆಗೆ, ಸಚಿವರಿಗೆ ಅಭಿನಂದನೆ ಸಲ್ಲಿಸಿರುತ್ತಾರೆ ಎಂದು ಈ ಮೂಲಕ ತಮ್ಮ ಗಮನಕ್ಕೆ ತರಲು ಬಯಸುತ್ತೇನೆ.

22) <u>ಪದವಿಪೂರ್ವ ಹಂತವನ್ನು ಪ್ರೌಢಶಾಲಾ ವಿಭಾಗಕ್ಕೆ ಸೇರಿಸುವ ಪ್ರಸ್ತಾವನೆಯನ್ನು ಈ ವರ್ಷದ ಬಜೆಟ್‌ನಲ್ಲಿ ಪ್ರಸ್ತಾಪಿಸಲಾಗಿರುವುದು. ಈ ವಿಷಯದ ಕುರಿತು ಸರ್ಕಾರ ಕ್ರಮ ಜರುಗಿಸುವಾಗ ಸಾಧಕ ಬಾಧಕಗಳ ಕುರಿತು ಪದವೀಧರ / ಶಿಕ್ಷಕರ ಕ್ಷೇತ್ರದಿಂದ ಆಯ್ಕೆಯಾದ ವಿಧಾನ ಪರಿಷತ್ತಿನ ಶಾಸಕರ ಜೊತೆ ಸಮಾಲೋಚನೆ ನಡೆಸಿ ಕ್ರಮ ಕೈಗೊಳ್ಳುವುದು:-</u>

ಈ ಬಗ್ಗೆ ಸೂಕ್ತ ಸಮಯದಲ್ಲಿ ಸಮಾಲೋಚಿಸಿ ಕ್ರಮ ವಹಿಸಲಾಗುವುದು.

23) 371ಜೆ ಕಲಂನಡಿಯಲ್ಲಿ ಬರುವ ಹೈದರಾಬಾದ್ ಕರ್ನಾಟಕದ ವಿಭಾಗದಲ್ಲಿ ಬರುವ ಶಾಲಾ ಕಾಲೇಜುಗಳ ಬೇಡಿಕೆ ತರುವ ಬಗ್ಗೆ:-

ಈ ಬಗ್ಗೆ ಆರ್ಥಿಕ ಇಲಾಖೆಯೊಂದಿಗೆ ಸಮಾಲೋಚಿಸಿ, ಮುಂದಿನ ಶೈಕ್ಷಣಿಕ ವರ್ಷದಿಂದ ಅಗತ್ಯವಿರುವೆಡೆ ಶಾಲಾ–ಕಾಲೇಜುಗಳ ಪ್ರಾರಂಭಕ್ಕೆ ಕ್ರಮ ವಹಿಸಲಾಗುವುದು.

24) ಹೈದರಾಬಾದ್ ಕರ್ನಾಟಕ ವಿಭಾಗದ ವ್ಯಾಪ್ತಿಯಲ್ಲಿ ಬರುವ ಸರ್ಕಾರಿ / ಖಾಸಗಿ ಅನುದಾನಿತ ಶಾಲಾ ಕಾಲೇಜುಗಳ ಮೂಲಭೂತ ಸೌಲಭ್ಯಗಳನ್ನು ಸುಧಾರಿಸಲು 371 ಜೆ ಅಡಿಯಲ್ಲಿ ನೀಡಿರುವ ಅನುದಾನದಲ್ಲಿ ಹೆಚ್.ಕೆ.ಡಿ.ಬಿ. ಮಂಡಳಿಯಿಂದ ಅನುದಾನ ಬಿಡುಗಡೆ ಮಾಡುವುದು:-

ಈ ಬಗ್ಗೆ ಹೆಚ್.ಕೆ.ಡಿ.ಬಿ.ಗೆ ಪ್ರಸ್ತಾವನೆ ಸಲ್ಲಿಸಲಾಗುವುದು.

**<u>29. ಅನುದಾನ ರಹಿತ ಶಿಕ್ಷಕರಿಗೆ ಕನಿಷ್ಠ ವೇತನ:-</u>**

Karan Raghupathi Vice President

ಈ ಬಗ್ಗೆ ಕಾನೂನು ಇಲಾಖೆ ಮತ್ತು ಕಾರ್ಮಿಕ ಇಲಾಖೆಗಳೊಂದಿಗೆ ಸಮಾಲೋಚಿಸಿ ಕನಿಷ್ಠ ವೇತನ ನೀತಿಯನ್ನು ಶಿಕ್ಷಕರಿಗೂ ಸಹ ಅನ್ವಯವಾಗುವಂತೆ ತಿದ್ದುಪಡಿ ಮಾಡಲು ಕ್ರಮ ವಹಿಸಲಾಗುವುದು.

**<u>30. ಖಾಸಗಿ ಅನುದಾನಿತ/ಪದವಿಪೂರ್ವ/ಪದವಿ ಕಾಲೇಜುಗಳಲ್ಲಿ ವಿದ್ಯಾರ್ಥಿಗಳಿಂದ ಪಡೆಯುತ್ತಿರುವ ಡಬಲ್ ಸ್ಟಾಂಡರ್ಡ್ ಶುಲ್ಕ ಬಗ್ಗೆ:-</u>**

ಈ ಬಗ್ಗೆ ಇಂದಿನ ಸಭೆಯಲ್ಲಿ ಹಣಕಾಸು ಇಲಾಖೆಯು ಒಪ್ಪಿಗೆ ನೀಡಿದ್ದು, ಇಲಾಖೆಯಿಂದ ಆದೇಶ ಹೊರಡಿಸಲು ಕ್ರಮ ವಹಿಸಲಾಗುವುದು.

* * *